# All India Radio: Bangalore
# National Bulletin In Kannada
# 20.02.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.02.2025 1.10 p.m.**

**<><><><>**

ಮುಖ್ಯಾಂಶಗಳು

1. ದೆಹಲಿ ನೂತನ ಮುಖ್ಯಮಂತ್ರಿಯಾಗಿ ರೇಖಾ ಗುಪ್ತಾ ಪ್ರಮಾಣವಚನ ಸ್ವೀಕಾರ
2. ಇಂದು ಅರುಣಾಚಲ ಪ್ರದೇಶ, ಮಿಜೋರಾಂ ರಾಜ್ಯಗಳ ಸ್ಥಾಪನಾ ದಿನ ; ಜನತೆಗೆ ರಾಷ್ಟ್ರಪತಿ ಶುಭಾಶಯ
3. ಪ್ರಯಾಗ್‌ರಾಜ್ ಮಹಾಕುಂಭಮೇಳ ಈವರೆಗೆ ೫೬ ಕೋಟಿ ೬೪ ಲಕ್ಷ ಶ್ರದ್ಧಾಳುಗಳಿಂದ ಪುಣ್ಯಸ್ನಾನ
4. ಐಸಿಸಿ ಚಾಂಪಿಯನ್ ಟ್ರೋಫಿ ಕ್ರಿಕೆಟ್ ; ದುಬೈನಲ್ಲಿ ಇಂದು ಭಾರತ-ಬಾಂಗ್ಲಾ ನಡುವೆ ಹಣಾಹಣಿ

<><><><>

ದೆಹಲಿಯ ೯ನೇ ಮುಖ್ಯಮಂತ್ರಿಯಾಗಿ ಬಿಜೆಪಿ ನಾಯಕಿ ರೇಖಾ ಗುಪ್ತಾ ಅವರು, ಐತಿಹಾಸಿಕ ರಾಮಲೀಲಾ ಮೈದಾನದಲ್ಲಿ ಇಂದು ಪ್ರಮಾಣವಚನ ಸ್ವೀಕರಿಸಿದರು. ಜೊತೆಗೆ ಸಚಿವ ಸಂಪುಟ ಸದಸ್ಯರು ಸಹ ಪ್ರಮಾಣವಚನ ಸ್ವೀಕರಿಸಿದರು. ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೇನಾ ನೂತನ ಮುಖ್ಯಮಂತ್ರಿ, ಸಂಪುಟ ಸದಸ್ಯರಿಗೆ ಪ್ರಮಾಣವಚನ ಬೋಧಿಸಿದರು.

ಧ್ವನಿ : ರೇಖಾಗುಪ್ತಾ (೩೮ ಸೆಕೆಂಡ್ಸ್)

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ಕೇಂದ್ರ ಸಚಿವರು ಹಾಗೂ ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಈ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿದ್ದರು. ರೇಖಾ ಗುಪ್ತಾ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಶಾಲಿಮಾರ್ ಭಾಗ್ ಕ್ಷೇತ್ರದಿಂದ ಚುನಾಯಿತರಾಗಿದ್ದಾರೆ. ಅವರು, ೧೯೯೨ರಲ್ಲಿ ದೆಹಲಿ ವಿಶ್ವವಿದ್ಯಾಲಯದ ದೌಲತ್‌ರಾಮ್ ಕಾಲೇಜಿನಲ್ಲಿ ಎಬಿವಿಪಿ ಸಂಘಟನೆ ಮೂಲಕ ತಮ್ಮ ರಾಜಕೀಯ ಪಯಣ ಆರಂಭಿಸಿದರು. ನಂತರ ಅವರು, ದೆಹಲಿ ವಿಶ್ವವಿದ್ಯಾಲಯ ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿದ್ದರು. ದೆಹಲಿಯಲ್ಲಿ ಬಿಜೆಪಿ ಮಹಿಳಾ ಮೋರ್ಚಾದ ಪ್ರಧಾನಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಈ ನಡುವೆ ದೆಹಲಿ ನಿರ್ಗಮಿತ ಮುಖ್ಯಮಂತ್ರಿ ಆತಿಶಿ, ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿರುವ ಬಿಜೆಪಿ ನಾಯಕಿ ರೇಖಾ ಗುಪ್ತಾ ಅವರನ್ನು ಅಭಿನಂದಿಸಿದ್ದಾರೆ. ಚುನಾವಣಾ ಪ್ರಚಾರದ ಸಮಯದಲ್ಲಿ ನೀಡಿದ ಎಲ್ಲಾ

ಭರವಸೆಗಳನ್ನು ಅವರು ಈಡೇರಿಸಲಿದ್ದಾರೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ. ಸುಷ್ಮಾ ಸ್ವರಾಜ್, ಶೀಲಾ ದೀಕ್ಷಿತ್ ಹಾಗೂ ಅತಿಶಿ ನಂತರ ರೇಖಾ ಗುಪ್ತಾ ದೆಹಲಿಯ ನಾಲ್ಕನೇ ಮಹಿಳಾ ಮುಖ್ಯಮಂತ್ರಿಯಾಗಿದ್ದಾರೆ. ಅರವಿಂದ್ ಕೇಜ್ರಿವಾಲ್ ನೇತೃತ್ವದ ಎಎಪಿಯ ೧೦ ವರ್ಷಗಳ ಆಡಳಿತವನ್ನು ಕೊನೆಗೊಳಿಸಿ, ೨೭ ವರ್ಷಗಳ ನಂತರ ಬಿಜೆಪಿ ದೆಹಲಿಯಲ್ಲಿ ಅಧಿಕಾರಕ್ಕೆ ಮರಳಿದೆ.

<><><><>

ಬಿಜೆಪಿ ನಾಯಕ, ರೋಹಿಣಿ ವಿಧಾನಸಭಾ ಕ್ಷೇತ್ರದ ಸದಸ್ಯ ವಿಜೇಂದರ್ ಗುಪ್ತಾ, ದೆಹಲಿ ವಿಧಾನಸಭೆಯ ಸ್ಪೀಕರ್ ಆಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ರೋಹಿಣಿ ವಿಧಾನಸಭಾ ಕ್ಷೇತ್ರದಲ್ಲಿ ಎದುರಾಳಿ ಆಮ್ ಆದ್ಮಿ ಪಕ್ಷದ ಪ್ರದೀಪ್ ಮಿತ್ತಲ್ ಅವರ ವಿರುದ್ಧ ೩೭ ಸಾವಿರ ಮತಗಳ ಅಂತರದಿಂದ ವಿಜೇಂದರ್ ಗುಪ್ತಾ ಚುನಾಯಿತರಾಗಿದ್ದರು. ಸುದ್ದಿಗಾರರೊಂದಿಗೆ ಮಾತನಾಡಿದ ಗುಪ್ತಾ, ದೆಹಲಿ ವಿಧಾನಸಭಾ ಸ್ಪೀಕರ್ ಜವಾಬ್ದಾರಿಯನ್ನು ನೀಡಿದ್ದಕ್ಕಾಗಿ ಪಕ್ಷಕ್ಕೆ ಅವರು, ಧನ್ಯವಾದ ಸಲ್ಲಿಸಿದ್ದಾರೆ. ತಾವು ತಮ್ಮ ಜವಾಬ್ದಾರಿಯನ್ನು ಪೂರೈಸುವುದಾಗಿ ವಿಧಾನಸಭೆಯಲ್ಲಿ ಆರೋಗ್ಯಕರ ಚರ್ಚೆಗಳು ನಡೆಯಲಿವೆ ಎಂದು ಆಶಯ ವ್ಯಕ್ತಪಡಿಸಿದ್ದಾರೆ.

<><><><>

ಈಶಾನ್ಯ ವಲಯದ ಅರುಣಾಚಲ ಪ್ರದೇಶ ಹಾಗೂ ಮಿಜೋರಾಂ ರಾಜ್ಯಗಳ ಜನತೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಜ್ಯೋತ್ಸವ ಶುಭಾಶಯ ಕೋರಿದ್ದಾರೆ. ಎರಡೂ ರಾಜ್ಯಗಳು ಶ್ರೀಮಂತ ಸಾಂಸ್ಕೃತಿಕ ಪರಂಪರೆ ಹೊಂದಿದ್ದು, ಜನರು ತಮ್ಮ ಅಸಾಧಾರಣ ನೈಸರ್ಗಿಕ ಪರಂಪರೆ, ಸಾಂಸ್ಕೃತಿಕ ಸಂಪ್ರದಾ ಸಂರಕ್ಷಿಸುತ್ತಿದ್ದಾರೆ ಎಂದು ರಾಷ್ಟ್ರಪತಿಯವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಆಶಯ ವ್ಯಕ್ತಪಡಿಸಿದ್ದಾರೆ. ಅಭಿವೃದ್ಧಿ ಹಾಗೂ ಉದ್ಕೃಷ್ಟತೆಯಲ್ಲಿ ಎರಡೂ ರಾಜ್ಯಗಳ ಜನರು ಹೊಸ ಅಧ್ಯಾಯಗಳನ್ನು ರಚಿಸಲಿ ಎಂದು ರಾಷ್ಟ್ರಪತಿಯವರು ಹಾರೈಸಿದ್ದಾರೆ.

<><><><>

ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭ ಮೇಳದಲ್ಲಿ ನಿನ್ನೆ ೧.೦೮ ಕೋಟಿಗೂ ಹೆಚ್ಚು ಭಕ್ತರು ಪವಿತ್ರ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಈವರೆಗೆ, ೫೭ ಕೋಟಿ ೬೪ ಲಕ್ಷ ಮಂದಿ ಪುಣ್ಯಸ್ನಾನದಲ್ಲಿ ಭಾಗಿಯಾಗಿದ್ದಾರೆ. ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಪವಿತ್ರ ಸ್ನಾನ ಮಾಡಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು. ಕೇಂದ್ರ ಸಚಿವ ಜಿತನ್ ರಾಮ್ ಮಾಂಝಿ ಅವರು ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿದರು ಕೇಂದ್ರ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರು ಸಹ ಪುಣ್ಯ ಸ್ನಾನದಲ್ಲಿ ಭಾಗಿಯಾಗಿ, ಮಹಾಕುಂಭದ ಸಮಯದಲ್ಲಿ ಹೆಚ್ಚುತ್ತಿರುವ ಯಾತ್ರಿಕರ ಬೇಡಿಕೆಯನ್ನು ಪೂರೈಸಲು ಹಲವು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಉತ್ತರ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಅಜಯ್ ರೈ, ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ಮತ್ತು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಇತರ ಅನೇಕ ಗಣ್ಯರು ಮಹಾಕುಂಭದಲ್ಲಿ ಭಾಗವಹಿಸಿದ್ದರು.

<><><><>

ಪ್ರಧಾನಿ ನರೇಂದ್ರ ಮೋದಿ ನಾಳೆ ನವದೆಹಲಿಯ ಭಾರತ್ ಮಂಟಪಂ ದಲ್ಲಿ ಸೋಲ್ ಲೀಡರ್‌ಶಿಪ್ ಶೃಂಗಸಭೆಯ ಮೊದಲ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ. ಭೂತಾನ್ ಪ್ರಧಾನಿ ದಾಶೊ ಶೇರಿಂಗ್ ತೋಬ್ಗೆ ಅವರು, ಗೌರವಾನ್ವಿತ ಅತಿಥಿಯಾಗಿ ಪ್ರಧಾನ ಭಾಷಣ ಮಾಡಲಿದ್ದಾರೆ. ಎರಡು ದಿನಗಳ ಕಾಲ ನಡೆಯಲಿರುವ ಸೋಲ್ ಲೀಡರ್‌ಶಿಪ್ ಸಮ್ಮೇಳನದಲ್ಲಿ ರಾಜಕೀಯ, ಕ್ರೀಡೆ, ಕಲೆ, ಮಾಧ್ಯಮ, ಆಧ್ಯಾತ್ಮಕ ಜಗತ್ತು ಹಾಗೂ ಸಾರ್ವಜನಿಕ ನೀತಿ ವ್ಯವಹಾರದಂತಹ ವೈವಿಧ್ಯಮಯ ಕ್ಷೇತ್ರಗಳ ನಾಯಕರು ತಮ್ಮ ಸ್ಫೂರ್ತಿದಾಯಕ ಜೀವನಯಾತ್ರೆ ಕುರಿತು ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

<><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದಿನಿಂದ ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಅಲ್ಲಿ ನಡೆಯಲಿರುವ ಜಿ-೨೦ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ದಕ್ಷಿಣ ಆಫ್ರಿಕಾದ ಅಂತಾರಾಷ್ಟ್ರೀಯ ಸಂಬಂಧಗಳು ಮತ್ತು ಸಹಕಾರ ಸಚಿವ ರೊನಾಲ್ಡ್ ಲಮೋಲಾ ಅವರ ಆಹ್ವಾನದ ಮೇರೆಗೆ ಅವರು ಭೇಟಿ ನೀಡುತ್ತಿದ್ದಾರೆ. ಜಿ-೨೦ ಎಫ್‌ಎಂಎಂನಲ್ಲಿ ವಿದೇಶಾಂಗ ಸಚಿವರ ಭಾಗವಹಿಸುವಿಕೆಯು ಜಿ-೨೦ ದೇಶಗಳೊಂದಿಗೆ ಭಾರತದ ತೊಡಗಿಸಿಕೊಳ್ಳುವಿಕೆಯನ್ನು ಬಲಪಡಿಸುತ್ತದೆ ಮತ್ತು ಈ ಪ್ರಮುಖ ವೇದಿಕೆಯಲ್ಲಿ ಜಾಗತಿಕ ದಕ್ಷಿಣದ ಧ್ವನಿಯನ್ನು ಹೆಚ್ಚಿಸುತ್ತದೆ. ವಿದೇಶಾಂಗ ಸಚಿವರ ಸಭೆಯ ಬಿಡುವಿನಲ್ಲಿ ಡಾ. ಜೈಶಂಕರ್ ಅವರು ಕೆಲವು ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ.

<><><>

ಮಹಾರಾಷ್ಟ್ರದ ಛತ್ರಪತಿ ಸಂಭಾಜಿ ನಗರದಲ್ಲಿರುವ ಔರಂಗಾಬಾದ್ ಕೈಗಾರಿಕಾ ನಗರವನ್ನು ದೇಶದ ಪ್ರಮುಖ ಕೈಗಾರಿಕಾ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಯೋಜನೆಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಛತ್ರಪತಿ ಸಂಭಾಜಿ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಔರಂಗಾಬಾದ್ ಕೈಗಾರಿಕಾ ನಗರದ ಉದ್ಯಮಿಗಳೊಂದಿಗೆ ನಡೆಸಿದ ಚರ್ಚೆಯ ಪ್ರಮುಖ ಅಂಶಗಳನ್ನು ವಿವರಿಸಿದರು. ಕಾರ್ಮಿಕರು ಮತ್ತು ಸ್ಥಳೀಯ ನಿವಾಸಿಗಳಿಗೆ ವಸತಿ ಪ್ರದೇಶಗಳು, ಆಸ್ಪತ್ರೆಗಳು ಹಾಗೂ ವಿಶ್ವವಿದ್ಯಾಲಯಗಳು ಸೇರಿದಂತೆ ನಗರದ ಮೂಲಸೌಕರ್ಯವನ್ನು ಹೆಚ್ಚಿಸಲು ೭ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುವುದು ಎಂದರು. ಇದಲ್ಲದೇ ನಾವೀನ್ಯತೆಯನ್ನು ಬೆಳೆಸಲು ಸುಧಾರಿತ ಕೌಶಲ್ಯಗಳೊಂದಿಗೆ ಕಾರ್ಯಪಡೆ ಸಜ್ಜುಗೊಳಿಸಲು ಕೌಶಲ್ಯ ಅಭಿವೃದ್ಧಿ ಕೇಂದ್ರ ಹಾಗೂ ನವೋದ್ಯಮ ಕೇಂದ್ರ ಸ್ಥಾಪಿಸಲಾಗುವುದು ಎಂದರು. ಮರಾಠವಾಡದ ಶ್ರೀಮಂತ ಐತಿಹಾಸಿಕ ಪರಂಪರೆಯನ್ನು ಪ್ರಸ್ತಾಪಿಸಿದ ಸಚಿವರು ಈ ಪರಂಪರೆಯನ್ನು ಆಧುನಿಕ ಅಭಿವೃದ್ಧಿಯ ಉಪಕ್ರಮದೊಂದಿಗೆ ಬೆರೆಸುವ ಸಮ್ಮಿಶ್ರ ಸರ್ಕಾರದ ಬದ್ಧತೆಯನ್ನು ವಿವರಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ರಾಷ್ಟ್ರ ತ್ವರಿತ ಪ್ರಗತಿ ಕಾಣುತ್ತಿದ್ದು, ಇದರಿಂದಾಗಿ ಮಹಾರಾಷ್ಟ್ರ, ಹರಿಯಾಣ ಹಾಗೂ ಇತ್ತೀಚೆಗೆ ದೆಹಲಿಯಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಪಡೆಯಲು ಕಾರಣವಾಗಿದೆ ಎಂದರು.

<><><>

ರಾಷ್ಟ್ರೀಯ ಸ್ವಯಂ ಸೇವಕ ಸಂಘ - ಆರ್‌ಎಸ್‌ಎಸ್ ನ ಮುಖ್ಯಸ್ಥ ಮೋಹನ್ ಭಾಗವತ್ ಅವರು, ನಿನ್ನೆ ನವದೆಹಲಿಯ ಝುಂಡೆವಾಲನ್ ಪ್ರದೇಶದಲ್ಲಿರುವ ಕೇಶವ್ ಕುಂಜ್ ಹೆಸರಿನ ಸಂಘಟನೆಯ ನವೀಕರಿಸಿದ ಕಚೇರಿಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಸಂಘದ ಬೆಳವಣಿಗೆ ಹಾಗೂ ದೃಷ್ಟಿಕೋನವನ್ನು ಪ್ರತಿಬಿಂಬಿಸಲು ಕಚೇರಿಯನ್ನು ಪರಿವರ್ತಿಸಲಾಗಿದೆ ಎಂದು ಹೇಳಿದರು. ಕೇಂದ್ರ ಸಚಿವರು ಹಾಗೂ ಹಿರಿಯ ಬಿಜೆಪಿ ನಾಯಕರಾದ ಅಮಿತ್ ಶಾ, ರಾಜನಾಥ್ ಸಿಂಗ್, ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ, ದತ್ತಾತ್ರೇಯ ಹೊಸಬಾಳೆ ಹಾಗೂ ಪವನ್ ಜಿಂದಾಲ್ ಮತ್ತಿತರ ಪ್ರಮುಖ ಆರ್‌ಎಸ್‌ಎಸ್ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><>

ಐಸಿಸಿ ಚಾಂಪಿಯನ್ಸ್ ಟ್ರೋಫಿಯ ೯ನೇ ಆವೃತ್ತಿಯಲ್ಲಿಂದು ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ ಮಧ್ಯಾಹ್ನ ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨.೩೦ ಕ್ಕೆ ಪ್ರಾರಂಭವಾಗಲಿದೆ. ಪಾಕಿಸ್ತಾನದ ಕರಾಚಿಯಲ್ಲಿ ನಿನ್ನೆ ನಡೆದ ಉದ್ಘಾಟನಾ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ, ಹಾಲಿ ಚಾಂಪಿಯನ್ ಪಾಕಿಸ್ತಾನವನ್ನು ೬೦ ರನ್‌ಗಳಿಂದ ಸೋಲಿಸುವುದರೊಂದಿಗೆ ಭರ್ಜರಿ ಆರಂಭ ಮಾಡಿದೆ.

<><><>

ಕತಾರ್ ಓಪನ್ ಟೆನಿಸ್‌ನಲ್ಲಿ ಇಂದು ಸಂಜೆ ನಡೆಯಲಿರುವ ಪುರುಷರ ಡಬಲ್ಸ್ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ರೋಹನ್ ಬೋಪಣ್ಣ ಮತ್ತು ಅವರ ಪೋರ್ಚುಗೀಸ್ ಪಾಲುದಾರ ನುನೊ ಬೋರ್ಗೆಸ್, ಯುನೈಟೆಡ್ ಕಿಂಗ್‌ಡಮ್‌ನ ಜೂಲಿಯನ್ ಕ್ಯಾಶ್ ಮತ್ತು ಲಾಯ್ಡ್ ಗ್ಲಾಸ್‌ಪೂಲ್ ಅವರನ್ನು ಎದುರಿಸಲಿದ್ದಾರೆ. ಇದಕ್ಕೂ ಮೊದಲು, ಬೋಪಣ್ಣ ಮತ್ತು ಬೋರ್ಗೆಸ್ ಕಳೆದ ಮಂಗಳವಾರ ನಡೆದ ಮೊದಲ ಸುತ್ತಿನಲ್ಲಿ ಹಾಲಿ ಆಸ್ಟ್ರೇಲಿಯನ್ ಓಪನ್ ರನ್ನರ್-ಅಪ್ ಅನ್ನು ಸೋಲಿಸಿದರು. ತಮ್ಮ ಮೊದಲ ಎಟಿಪಿ ಟೂರ್ನಮೆಂಟ್‌ನಲ್ಲಿ ಒಟ್ಟಾಗಿ ಆಡುತ್ತಿರುವ ಈ ಜೋಡಿ, ಇಟಲಿಯ ಸಿಮೋನ್ ಬೊಲೆಲ್ಲಿ ಮತ್ತು ಆಂಡ್ರಿಯಾ ವವಾಸ್ಸೋರಿ ವಿರುದ್ಧ ೭-೬, ೭-೬ ಅಂತರದಲ್ಲಿ ಜಯ ಸಾಧಿಸಿತ್ತು. ಇಂದು ನಡೆಯುವ ಮತ್ತೊಂದು ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಯೂಕಿ ಭಾಂಬ್ರಿ ಮತ್ತು ಕ್ರೊಯೇಷಿಯಾದ ಪಾಲುದಾರ ಇವಾನ್ ಡೋಡಿಗ್ ಜೋಡಿ, ಕ್ರೊಯೇಷಿಯಾದ ಮೇಟ್ ಪವಿಕ್ ಮತ್ತು ಸಾಲ್ವಡಾರ್ ಮಾರ್ಸೆಲೊ ಅರೆವಾಲೊ ಜೋಡಿಯನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>